**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003**

**ಸಂಖ್ಯೆ: ಸಿ1.SSLC/ಪ.ಕೇಂ.ರ/25/2023–24** ದಿನಾಂಕ:13–03–2024

**ಸುತ್ತೋಲೆ**

ವಿಷಯ: 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಕೇಂದ್ರಗಳ ಕೊಠಡಿ ಮೇಲ್ವಿಚಾರಕರಾಗಿ ಪ್ರೌಢಶಾಲಾ ಶಿಕ್ಷಕರನ್ನು ನೇಮಿಸಿಕೊಳ್ಳುವುದು ಮತ್ತು ಆಯಾ ತಾಲ್ಲೂಕು ಹಂತದಲ್ಲಿ ತರಬೇತಿ ನೀಡುವ ಬಗ್ಗೆ.

ಉಲ್ಲೇಖ: 1. ಮಂಡಲಿ ಸುತ್ತೋಲೆ ಸಂಖ್ಯೆ:ಸಿ1/ಎಸ್.ಎಸ್.ಎಲ್.ಸಿ/ಪ–1.ಸುತ್ತೋಲೆ–93/2023–24 ದಿ:04–03–2024

2. ದಿನಾಂಕ:12–03–2024 ರಂದು ಮಂಡಲಿಯಲ್ಲಿ ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಚರ್ಚಿಸಿದಂತೆ.

*****

2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–1ರ ಪರೀಕ್ಷಾ ಕೇಂದ್ರಗಳಿಗೆ ಕೊಠಡಿ ಮೇಲ್ವಿಚಾರಕರಾಗಿ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವಂತೆ ಉಲ್ಲೇಖ–1 ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಪರೀಕ್ಷಾ ಕೇಂದ್ರಗಳಿಗೆ ಕೊಠಡಿ ಮೇಲ್ವಿಚಾರಕರಾಗಿ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಷರತ್ತನ್ನು ಮಂಡಲಿಯಿಂದ ಹಿಂಪಡೆಯಲಾಗಿದೆ. ಹಾಗಾಗಿ ಕಳೆದ ಸಾಲಿನಲ್ಲಿದ್ದಂತೆ ಎಸ್.ಎಸ್.ಎಲ್.ಸಿ ಪರೀಕ್ಷಾ ಕಾರ್ಯಗಳಿಗೆ ಪ್ರೌಢ ಶಾಲೆಯ ಸಹಶಿಕ್ಷಕರನ್ನು ನಿಯೋಜಿಸಿಕೊಳ್ಳಲು ಅನುಮತಿಸಿದೆ.

ಪ್ರೌಢಶಾಲೆಯ ಸಹಶಿಕ್ಷಕರನ್ನು ಕೊಠಡಿ ಮೇಲ್ವಿಚಾರಕರಾಗಿ ಹಾಗೂ ಪರೀಕ್ಷೆಯ ಇತರೆ ಕಾರ್ಯಗಳಿಗೆ ನಿಯೋಜಿಸಿಕೊಳ್ಳುವಾಗ ಪರೀಕ್ಷಾ ಕೇಂದ್ರವಿರುವ ಕ್ಲಸ್ಟರ್‌ನ್ನು ಹೊರತುಪಡಿಸಿ ಪರೀಕ್ಷಾ ಕೇಂದ್ರಕ್ಕೆ ಹತ್ತಿರವಿರುವ ಬೇರೆ ಕ್ಲಸ್ಟರ್‌ನಿಂದ ಶಿಕ್ಷಕರನ್ನು ನೇಮಿಸಿಕೊಳ್ಳುವುದು. ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರು ಕೊರತೆಯಿದ್ದಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಕೊಠಡಿ ಮೇಲ್ವಿಚಾರಕರಾಗಿ ನೇಮಿಸಿಕೊಳ್ಳುವಂತೆ ತಿಳಿಸಿದೆ. ಹಾಗೆಯೇ ಪರೀಕ್ಷೆಯಿರುವ ವಿಷಯದ ದಿನದಂದು ಸದರಿ ವಿಷಯದ ಶಿಕ್ಷಕರನ್ನು ಕೊಠಡಿ ಮೇಲ್ವಿಚಾರಕರನ್ನಾಗಿ ನೇಮಕ ಮಾಡಬಾರದು ಹಾಗೂ ಟಿ.ಜಿ.ಟಿ ಶಿಕ್ಷಕರನ್ನು ಗಣಿತ ಮತ್ತು ವಿಜ್ಞಾನ ವಿಷಯದ ಪರೀಕ್ಷೆ ನಡೆಯುವ ದಿನಗಳಂದು ಕೊಠಡಿ ಮೇಲ್ವಿಚಾರಕರನ್ನಾಗಿ ನೇಮಕ ಮಾಡಬಾರದು.

ಉಲ್ಲೇಖ–2ರ ವಿಡಿಯೋ ಕಾನ್ಫರೆನ್ಸ್‌ನಲಿ ಅಯ್ದ ಮುಖ್ಯ ಅಧೀಕ್ಷಕರು ಮತ್ತು ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದ್ದು, ತರಬೇತಿ ಪಡೆದ ಸಂಪನ್ಮೂಲ ವ್ಯಕ್ತಿಗಳು ಆಯಾ ತಾಲ್ಲೂಕು ಹಂತದಲ್ಲಿ **ದಿನಾಂಕ:15–03–2024 ರಿಂದ ದಿನಾಂಕ:20–03–2024 ರೊಳಗಾಗಿ** ಕೊಠಡಿ ಮೇಲ್ವಿಚಾರಕರಿಗೆ ತರಬೇತಿ ನೀಡಲು ತಿಳಿಸಿದೆ.

ಉಳಿದಂತೆ ಉಲ್ಲೇಖ–1ರ ಸುತ್ತೋಲೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಅನುಪಾಲನೆ ಮಾಡಿ ಪರೀಕ್ಷಾ ಪ್ರಕ್ರಿಯಗಳಲ್ಲಿ ಯಾವುದೇ ಲೋಪದೋಷಗಳು ಉಂಟಾಗದಂತೆ ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಈ ಮೂಲಕ ಸೂಚಿಸಿದೆ.

Manjushree 13/3/24.

(ಎನ್.ಮಂಜುಶ್ರೀ, ಭಾ.ಆ.ಸೇ.)

ಅಧ್ಯಕ್ಷರು

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ, ಶಾಲಾ ಶಿಕ್ಷಣ ಇಲಾಖೆ ರವರಿಗೆ.
3. ರಾಜ್ಯದ ಎಲ್ಲಾ ಜಿಲ್ಲಾ ಎಸ್.ಎಸ್.ಎಲ್.ಸಿ. ನೋಡಲ್ ಅಧಿಕಾರಿಗಳು, ಜಿಲ್ಲಾ ಉಪನಿರ್ದೇಶಕರ ಕಛೇರಿ ರವರಿಗೆ
4. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಳುಹಿಸುತ್ತಾ, ನಿಮ್ಮ ವಲಯದ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯಸ್ಥರಿಗೆ ಈ ಸುತ್ತೋಲೆಯ ಅಂಶಗಳನ್ನು ವಿವರಿಸಿ ಅದರಂತೆ ಸೂಕ್ತ ಕ್ರಮಕೈಗೊಳ್ಳಲು ತಿಳಿಸಿದೆ.
5. ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ.

ಪ್ರತಿಯನ್ನು:

1. ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡಗಳು, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯದರ್ಶಿಗಳು ಮತ್ತು ಪದನಿಮಿತ್ತ ಸಹನಿರ್ದೇಶಕರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ.